209

ನಂದೀದುರ್ಗದ ಡಿವಿಜ್ಯ ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ಯ 1895—96ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 277.

ಮೃತಪಟ್ಟ ರಡ್ಡಿಗರ ಪಾಪಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರರು) ಬೆಂಗಳೂರು ಅಕ್ಕಿಪೇಟೆಯಲ್ಲಿ ಇರುವ ಗಂಗೆಮ್ಮನು, ಮೃತಪಟ್ಟ ಸದರೀ ರಡ್ಡಿಗರ ಪಾಪಯ್ಯನವರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಅಕ್ಕಿಪೇಟೆ ಸ್ಥಳದ ಗಂಗಮ್ಮನು, ಡಿಟೋ ಪೇಟೆ ವಾಸಸ್ಥರಾಗಿ ಮೃತಪಟ್ಟ ರಡ್ಡಿಗರ ಪಾಪಯ್ಯನ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ ಟಿಫಿಕೇಟ್ ಬ್ಯಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾವ ಗಂಗಮ್ಮನ ಅರ್ಜಿಯನ್ನು ಸ್ಯ 1896ನೇ ಇಸವಿ ಮಾರ್ಚಿ ತಿಂಗಳ ತಾರೀಖು 31ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಡ್ಡಿಗರ ಪಾಪಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1896ನೇ ಇಸವಿ ಮಾರ್ಚಿ ತಿಂಗಳ 10ನೇ ತಾರೀಖಿನಲ್ಲಿ ಕೋರ್ಟು ಸೊಪರ್ ನಿಸ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಕೋಲಾರ ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಯೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 9ನೇ ಮಾರ್ಚಿ 1896.

1. ಕಂದಾಯದ ಬಾಕಿದಾರರಾದ ರಪ್ಯೂವರಾಚಾರ್ ಮೈನರ್, ಗಾರ್ಡಿಯ್ ವೆಂಕಟಲಕ್ಷ್ಮಮ್ಮನಿಂದ ಬರಬೇಕಾದ ಜಮ್ಮಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತನ್ನ ಹಕ್ಕು ಬಾಧ್ಯತೆ ಕೋಲಾರ ಡಿಸ್ಟ್ರಿಕ್ಟು ಚಿಕ್ಕಬಳ್ಳಾಪುರ ಸಬ್ ಡಿವಿಜ್ಯ ಆಫಿಸಿನಲ್ಲಿ 1896ನೇ ಇಸವಿ ಏಪ್ರಿಲ್ 21ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ಥಿರಸ್ವತ್ತಿನ ಸಾಲಜಾಸ್ತಿಯನು 1894—95ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಪೀಲ್ ವೇರಿಗೆ 1,412—8—4 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುವ್ಯಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೊತ್ತೀಸ್ತರ ಸವಾಲ್ ಮಾಡುತ್ತಾರೆಯೇ ಯಾ ವಿಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಕವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲ್‌ಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನ ಪೂರ್ತಿಯಾಗಿ ಪಾವತಿಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ನಷ್ಟಲಕ್ಷ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಕವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಗಾಯತು 30 ದಿವಸಗಳ್ಳ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈನಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

೨೫ ಸ್ವತ್ತಿನ ತಫ್ಸೀಲ್.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕಿದಾರರ ಹೆಸರು.	ಕಟ್ಟಡಗಳು.		ಜಮೀನು.				ಬರಬೇಕಾದ ನೋಟಿನ ಪೈಸೆ ಸರ್ಕಾರಕ್ಕೆ ಬರಬೇಕಾದ ಮತ್ತು ಸಲಿಯಾನಾ ಸರ್ಕಾರಕ್ಕೆ ಬರಬೇಕಾದ ಪೈಸೆ ಸೇರಿದ್ದು.		
				ಕಟ್ಟಿಸಿದ ಹೆಸರು.	ಅಂದಾಜಿ ಕಿಮ್ಮತ್ತು.	ನಂಬರು ಅಥವಾ ಜಮೀನಾ ಹೆಸರು.	ಖುಷ್ಕಿ ತರಿ ಅಥವಾ ಬಾಗಾಯತು.	ವಿಸ್ತೀರ್ಣ.		ವಿವರ.			
1	2	3	4	5	6	7	8	9		10		11	
				ರೂ. ಆ. ಪೈ.				ಎಕರೆ.	ಗುಂಟೆ.	ರೂ.	ಆ. ಪೈ.	ರೂ.	ಆ. ಪೈ.
ಚಿಕ್ಕಬಳ್ಳಾಪುರ.	ಚಿಕ್ಕಬಳ್ಳಾಪುರ.	ಸರ್ವೆಮೂನ್ಸೀಪಾಲಿಟಿ.	ರಮ್ಯೇವರಾಚಾರ್ ಮೈನರ್, ಗಾರ್ಡಿಯರ್ ತಾಯಿ ವೆಂಕಟಲಕ್ಷ್ಮಮ್ಮ.		ಸರ್ವೆಮೂನ್ಸೀಪಾಲಿಟಿ ಬಾಕಿದಾರನಿಗೆ ಸೇರಿದ ಹಿಕ್ಕೆ ಜಪ್ತಿ.	ಖುಷ್ಕಿ		392	6	347	0 0	1048	11 0
						ತರೀ		101	7	235	1 0	ಬಡ್ಡಿ	—
						ಬಾಗಾಯತು		25	16	119	0 0	363	13 4
						ಪರಂಪೋಕು		208	39	3	4 0		
						ಟೋಟಲ್		727	28	704	5 0	1412	8 4
						ಸಾಲಿಯಾನಾ ಸರ್ಕಾರಕ್ಕೆ ಬರಬೇಕಾದ್ದು							
						ಕ್ಯೂಟ್‌ರೆಂಟ್				88	0 0		
						ಸೆಸ್ಸು				44	0 2		
										132	0 2		

ಸಿ. ಮಾದಯ್ಯ,
ಪೈಯ್ಟ್ ಕಮ್ಮಿಷನರ್.

ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟ್ ಇಲಾಖಾ.

ನೋಟಿಫಿಕೇಷ್ನ.

ತಾರೀಖು 14ನೇ ಮಾರ್ಚಿ 1896.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಹುಣಸೂರು ಸಂದಲ್‌ಕೋಣಿಯಲ್ಲಿ 113 ಟ್ಸ ಬಿ ಹಕ್ಕೆಯು 1896ನೇ ಇಸವಿ ಏಪ್ರಿಲ್ 20ರಲ್ಲೂ ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರು ಅಥವಾ ಅದಕ್ಕಾಗಿ ನೇಮಿಸಲ್ಪಡುವ ಇತರ ಆಫಿಸರವರಿಂದ ಹರಾಜು ಮಾಡಿಸಲ್ಪಡುತ್ತೆ.

ಷರತ್ತು.—1895ನೇ ಇಸವಿ ಏಪ್ರಿಲ್ ಮಾಹೆ 15ನೇ ನಂಬರಿ ಮೈಸೂರು ಗೆಜೆಟ್ಟನಲ್ಲಿ ಘಾಯಿಷ್ ಮಾಡಲ್ಪಟ್ಟಿರುವ ಮಾರ್ಚಿ ಮಾಹೆ 15ನೇ ಮರ್ಕುಂ 15230 ಆರ್. ಎಫ್. 155—92ನೇ ನಂಬರಿ ಗವರ್ನಮೆಂಟ್ ಇಸ್ತಿಹಾರ್‌ನಾಮೆಯನ್ನು ನೋಡಿಕೊಳ್ಳಬಹುದು.

ಟಿ. ಅಬ್ದುಲ್‌ಕರೀಮ್,
ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರ್.